ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017–18 ದಿನಾಂಕ: 05–11–2018

## ಪತ್ರಿಕಾ ಪ್ರಕಟಣೆ

# ಉಪ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಬೆಂಗಳೂರು ನಗರ ಜಿಲ್ಲಾಪಂಚಾಯತ್ ಕೆಡಿಪಿ ಸಭೆ

ಬೆಂಗಳೂರು, ನವೆಂಬರ್ 5 (ಕರ್ನಾಟಕ ವಾರ್ತೆ)

ಅಧಿಕಾರಿಗಳು ಕಾರ್ಯಕ್ರಮಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಬೇಕು. ವಿಳಂಬ ಧೋರಣೆ ತೋರಿದಲ್ಲಿ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅವರು ತಿಳಿಸಿದರು.

ಅವರು ಇಂದು ಬೆಂಗಳೂರು ನಗರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ತ್ರೈಮಾಸಿಕ ಕೆ.ಡಿ.ಪಿ. ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಭೆಯಲ್ಲಿ ಜಿಲ್ಲಾ ಕೃಷಿ ಅಧಿಕಾರಿಗಳು ಬೆಳೆ ವಿಮೆ, ಸಾಲ ಮನ್ನಾ ಹಾಗೂ ಇಲಾಖೆಯ ಇತರ ಕಾರ್ಯಕ್ರಮಗಳ ಬಗ್ಗೆ ವಿವರ ನೀಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಉಪ ಮುಖ್ಯಮಂತ್ರಿಗಳು ರೈತ ಸಾಲ ಮನ್ನಾ ಕುರಿತು ನಿಖರವಾದ ಮಾಹಿತಿ ಸಂಗ್ರಹಿಸಬೇಕು ಹಾಗೂ ಅನುದಾನವನ್ನು ಬಳಸಿ ಕಾರ್ಯಕ್ರಮಗಳ ಪ್ರಗತಿ ಸಾಧಿಸಬೇಕು ಎಂದು ಹೇಳಿದರು.

ಆರೋಗ್ಯ ಇಲಾಖೆ ವತಿಯಿಂದ ನಗರದಲ್ಲಿ ಡೆಂಗ್ಯೂ, ಚಿಕನ್ ಗುನ್ಯಾ, ಮಲೇರಿಯಾ ನಿಯಂತ್ರಣಕ್ಕೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಈ ಸಂದರ್ಭದಲ್ಲಿ ಆರೋಗ್ಯ ಅಧಿಕಾರಿಗಳು ತಿಳಿಸಿದರು.

ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಬೆಂಗಳೂರು ನಗರ ಜಿಲ್ಲೆಯಾದ್ಯಂತ ಒಟ್ಟು 126 ಅಂಬೇಡ್ಕರ್ ಭವನ ನಿರ್ಮಾಣಕ್ಕೆ ಅನುಮೋದನೆ ದೊರೆತ್ತಿದ್ದು ಇನ್ನು 72 ಭವನಗಳ ಕಾಮಗಾರಿ ನಿರ್ಮಾಣ ಹಂತದಲ್ಲಿ ಇದ್ದು ಇದನ್ನು ಪೂರ್ಣಗೊಳಿಸಬೇಕೆಂದು ಅಧಿಕಾರಿಗಳಿಗೆ ಉಪ ಮುಖ್ಯಮಂತ್ರಿಗಳು ಸೂಚಿಸಿದರು.

ಶಿಕ್ಷಣ ಇಲಾಖೆ ಬಗ್ಗೆ ಗಮನಹರಿಸಿದ ಉಪ ಮುಖ್ಯಮಂತ್ರಿಗಳು ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಕೊರತೆಯಿಂದ ಶಾಲೆಗಳನ್ನು ಮುಚ್ಚಬೇಕಾದ ಪರಿಸ್ಥಿತಿ ಬಂದೊದಗಿದೆ. ಹೆಣ್ಣುಮಕ್ಕಳ ದಾಖಲಾತಿಗಾಗಿ ಶಾಲೆಗಳು ಶ್ರಮಿಸಬೇಕು. ಶಾಲೆಗಳಲ್ಲಿ ಹೆಣ್ಣುಮಕ್ಕಳ ಶೌಚಾಲಯಗಳಿಲ್ಲ ಎಂಬ ದೂರಿನ ಹಿನ್ನಲೆಯಲ್ಲಿ ಎಲ್ಲಾ ಶಾಲೆಗಳಲ್ಲಿ ಕಡ್ಡಾಯವಾಗಿ ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಶೌಚಾಲಯಗಳನ್ನು ನಿರ್ಮಿಸಲು ಸೂಚಿಸಿದರು.

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಯೋಜನೆಯಡಿ ಬೆಂಗಳೂರು ನಗರ ಜಿಲ್ಲೆಗೆ 79 ಶುದ್ದ ಕುಡಿಯುವ ನೀರಿನ ಘಟಕಗಳ ಸ್ಥಾಪನೆಗೆ ಅನುಮೋದನೆಯಾಗಿದ್ದು ಕೆಲವು ಘಟಕಗಳಲ್ಲಿ ನೀರಿನ ಕೊರತೆಯಿಂದ ಸಮಸ್ಯೆಯಾಗಿದ್ದು ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆ ಎಂದು ಸ್ಥಾಯಿ ಸಮಿತಿ ಸದಸ್ಯರು ದೂರಿದ ಹಿನ್ನಲೆಯಲ್ಲಿ ಉಪ ಮುಖ್ಯಮಂತ್ರಿಗಳು ಈ ಬಗ್ಗೆ ಕೂಡಲೇ ಕ್ರಮ ವಹಿಸುವಂತೆ ಇಲಾಖೆಯ ಕಾರ್ಯಪಾಲಕ ಅಭಿಯಂತರರಿಗೆ ಸೂಚಿಸಿದರು.

ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ವತಿಯಿಂದ ವಿತರಿಸಲಾದ ಬಿಪಿಎಲ್, ಎಪಿಎಲ್ ಕಾರ್ಡುಗಳ ವಿವರ ಪಡೆದ ಉಪ ಮುಖ್ಯಮಂತ್ರಿಗಳು ಉಳಿದಿರುವ ಎರಡು ತಿಂಗಳುಗಳಲ್ಲಿ ವಿತರಿಸಬೇಕು ಹಾಗೂ ಪಡಿತರ ವಿತರಣೆ ಸಮರ್ಪಕವಾಗಿ ಮಾಡಲು ಸೂಚಿಸಿದರು.

ಇದೇ ಸಂದರ್ಭದಲ್ಲಿ ಪಶುಸಂಗೋಪನೆ, ಗ್ರಾಮವಿಕಾಸ, ವಸತಿ ಯೋಜನೆ, ಅಬಕಾರಿ ಹಾಗೂ ಇತರ ಇಲಾಖೆಗಳ ಮಾಹಿತಿಯನ್ನು ಉಪ ಮುಖ್ಯಮಂತ್ರಿಗಳು ಪಡೆದುಕೊಂಡರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಅಧ್ಯಕ್ಷ ಮುನಿರಾಜು, ಉಪಾಧ್ಯಕ್ಷರಾದ ಪಾರ್ವತಿ ಚಂದ್ರಪ್ಪ, ಶಾಸಕರಾದ ಎಸ್.ಟಿ. ಸೋಮಶೇಖರ್, ವಿಧಾನ ಪರಿಷತ್ ಸದಸ್ಯರಾದ ದೇವೇಗೌಡ, ಜಿಲ್ಲಾಧಿಕಾರಿ ವಿಜಯಶಂಕರ್, ಜಿಲ್ಲಾ ಪಂಚಾಯತ್ ಸಿ.ಇ.ಓ. ಅರ್ಚನಾ ಹಾಗೂ ಜಿಲ್ಲಾಮಟ್ಟದ ಇತರೆ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿದ್ದರು.

# ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಉನ್ನತ ಹಾಗೂ ವಿದೇಶಿ ವ್ಯಾಸಂಗಕ್ಕಾಗಿ ಮತ್ತು ನೇರ ಅವಧಿ ಸಾಲಕ್ಕಾಗಿ ಅರ್ಜಿ ಆಹ್ವಾನ

ಬೆಂಗಳೂರು, ನವೆಂಬರ್ 5 (ಕರ್ನಾಟಕ ವಾರ್ತೆ)

2018–19 ನೇ ಸಾಲಿಗೆ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ಮತ್ತು ಆರ್ಥಿಕ ನಿಗಮ (NMDFC) ಯೋಜನೆಯಡಿಯಲ್ಲಿ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಉನ್ನತ ಮತ್ತು ವಿದೇಶಿ ವ್ಯಾಸಂಗಕ್ಕಾಗಿ ಹಾಗೂ ನೇರ ಅವಧಿ ಸಾಲಕ್ಕೆ (ವ್ಯಾಪಾರಕ್ಕಾಗಿ) ಅಲ್ಪಸಂಖ್ಯಾತ ಜನಾಂಗದವರಾದ ಮುಸ್ಲಿಂ, ಕ್ರೈಸ್ತರು, ಜೈನರು, ಬೌದ್ಧರು, ಸಿಖ್ಖರು, ಮತ್ತು ಪಾರ್ಸಿ ಜನಾಂಗದವರಿಗೆ ಸಾಲ ಸೌಲಭ್ಯ ಪಡೆಯಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಇಚ್ಛೆಯುಳ್ಳ ಅರ್ಜಿದಾರರು ವೆಬ್‌ಸೈಟ್ www.kmdc.kar.nic.in, kmdc.karnataka.gov.in ಇದರ ಮುಖಾಂತರ ಅರ್ಜಿಗಳನ್ನು ಪಡೆದು ಅಗತ್ಯ ದಾಖಲಾತಿಗಳನ್ನು ಸಲ್ಲಿಸಲು ನವೆಂಬರ್ 24 ಕೊನೆಯ ದಿನಾಂಕವಾಗಿರುತ್ತದೆ. ಈ ಅವಧಿಯ ಒಳಗೆ ಕಚೇರಿಯ ವೇಳೆಯಲ್ಲಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ನಂತರ ಬಂದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.

ಹೆಚ್ಚಿನ ಮಾಹಿತಿ ಹಾಗೂ ಅರ್ಜಿ ನಮೂನೆಗಾಗಿ ಜಿಲ್ಲಾ ವ್ಯವಸ್ಥಾಪಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ (ನಿ), ಹಮೀದ್ ಷಾ ಕಾಂಪ್ಲೆಕ್ಸ್, 2ನೇ ಮಹಡಿ, ಎಸ್.ಎಫ್ 2, ಹಲಸೂರು ಗೇಟ್ ಪೊಲೀಸ್ ಸ್ಟೇಷನ್ ಹಿಂಭಾಗ, ಕಬ್ಬನ್ ಪೇಟೆ ಮುಖ್ಯರಸ್ತೆ, ಬೆಂಗಳೂರು ನಗರ ಜಿಲ್ಲೆ, ಅಥವಾ ದೂರವಾಣಿ ಸಂಖ್ಯೆ 080–22114815, 22114817 ಮೂಲಕ ಹಾಗೂ ವೆಬ್‌ಸೈಟ್ www.kmdc.kar.nic.in, kmdc.karnataka.gov.in ಮೂಲಕ ಸಂಪರ್ಕಿಸಬಹುದಾಗಿದೆ.

**ನಿಗಮದ ಯೋಜನೆಗಳ ವಿವರ:–**

1. ನೇರ ಸಾಲದ ಯೋಜನೆಯಡಿ ಉನ್ನತ ಮತ್ತು ವಿದೇಶಿ ವ್ಯಾಸಂಗಕ್ಕಾಗಿ (NMDFC)
2. ನೇರ ಅವಧಿ ಸಾಲದ ಯೋಜನೆಯಡಿ (NMDFC) ವ್ಯಾಪಾರಕ್ಕಾಗಿ.

**ನೇರ ಸಾಲದ ಯೋಜನೆಯಡಿ ಉನ್ನತ ಮತ್ತು ವಿದೇಶಿ ವ್ಯಾಸಂಗಕ್ಕಾಗಿ (NMDFC) ಈ ಯೋಜನೆಯಲ್ಲಿ ಸಾಲ ಸೌಲಭ್ಯ ಪಡೆಯುವ ವಿದ್ಯಾರ್ಥಿಗಳಿಗೆ ಇರಬೇಕಾದ ಅರ್ಹತೆ ಮತ್ತು ಷರತ್ತುಗಳು:**

1. ಸದರಿ ಯೋಜನೆಯಲ್ಲಿ 80:10:10 ಅನುಪಾತದಲ್ಲಿ ಅಂದರೆ ಶೇಕಡ 80 ರಷ್ಟು ಮುಸ್ಲಿಂ, ಶೇಕಡ 10 ರಷ್ಟು ಕ್ರೈಸ್ತರು ಹಾಗೂ 10 ರಷ್ಟು ಇತರೆ (ಜೈನರು, ಬೌದ್ಧರು, ಸಿಖ್ಖರು ಮತ್ತು ಪಾರ್ಸಿ) ಜನಾಂಗದವರಿಗೆ ನಿಗಮದಿಂದ ಸಾಲ ಸೌಲಭ್ಯವನ್ನು ಒದಗಿಸಲು ಅವಕಾಶವಿರುತ್ತದೆ.
2. ಮಹಿಳೆಯರಿಗೆ ಶೇಕಡ 33% ರಷ್ಟು, ಅಂಗವಿಕಲರಿಗೆ ಮತ್ತು ಮಾಜಿ ಸೈನಿಕರಿಗೆ ಶೇಕಡ 3% ತಪ್ಪದೆ ಆದ್ಯತೆ ಮೇರೆಗೆ ನಿಗಮದಿಂದ ಸಾಲ ಸೌಲಭ್ಯ ಒದಗಿಸಲು ಅವಕಾಶವಿರುತ್ತದೆ.
3. ಈ ಯೋಜನೆಯಡಿ ಸೌಲಭ್ಯ ಪಡೆಯುವ ಅರ್ಜಿದಾರರು ಸರ್ಕಾರವು ಅಂಗೀಕರಿಸಿದ ಅಲ್ಪಸಂಖ್ಯಾತ ವರ್ಗಗಳ ಪ್ರವರ್ಗ-1, 2ಬಿ, ಮತ್ತು 3 ಬಿ ಗುಂಪಿಗೆ ಸೇರಿದವರಾಗಿರಬೇಕು. (ಸರ್ಕಾರಿ ಆದೇ ಸಂಖ್ಯೆ:SWD/225/BCA/2000, ದಿನಾಂಕ: 30-03-2002.
4. ಅರ್ಜಿದಾರರ ಕುಟುಂಬ ವಾರ್ಷಿಕ ಆದಾಯ ರೂ. 6,00,000/- ಲಕ್ಷ ಮೀರಿರಬಾರದು.
5. ಅರ್ಜಿದಾರರು ಕರ್ನಾಟಕ ರಾಜ್ಯದಲ್ಲಿ ನಿನಿಷ್ಠ 15 ವರ್ಷಗಳು ವಾಸವಾಗಿರಬೇಕು.
6. ಅರ್ಜಿದಾರರ ವಯೋಮಿತಿ ಕನಿಷ್ಠ 18 ರಿಂದ 40 ವರ್ಷಗಳು ಮೀರಿರಬಾರದು.
7. ಅರ್ಜಿದಾರರು ತಮ್ಮ ವಿಳಾಸದ ದೃಢೀಕರಣಕ್ಕಾಗಿ ಆಧಾರ (UID) ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸಿ ಅದನ್ನು ಅರ್ಜಿದಾರರ ಬ್ಯಾಂಕ್ ಖಾತೆಗೆ ಹೊಂದಾಣಿಕೆ (LINK) ಮಾಡಬೇಕು ಮತ್ತು ನಿಗಮದ ನಿಯಮಾನುಸಾರ ಇತರೆ ದಾಖಲೆಗಳು ನೀಡಲು ಸಿದ್ಧರಿರಬೇಕು.
8. ಅರ್ಜಿದಾರರೇ ಖುದ್ದಾಗಿ ಜಿಲಾ ್ಲಕಚೇರಿಗೆ ಭೇಟಿ ಮಾಡಿ ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿಗಳನ್ನು ಸಲ್ಲಿಸಬೇಕು ಹಾಗೂ ಅಪೂರ್ಣ ದಾಖಲಾತಿಗಳುಳ್ಳ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.
9. ಈ ಹಿಂದೆ ನಿಗಮದ ಯೋಜನೆಗಳನ್ನು ಸಾಲ ಸೌಲಭ್ಯ ಪಡೆದವರಿಗೆ ಮತ್ತೊಮ್ಮೆ ಸಾಲ ಸೌಲಭ್ಯ ಪಡೆಯಲು ಅರ್ಹತೆ ಇರುವುದಿಲ್ಲ.
10. ನಿಗಮದ ನಿಯಮಾನುಸಾರ ನಿಗಮದಿಂದ ನೀಡುವ ಸಾಲದ ಮೊತ್ತಕ್ಕೆ ಭದ್ರತೆಗಾಗಿ ಆಸ್ತಿಯನ್ನು ನಿಗಮದ ಹೆಸರಿಗೆ ಅಡಮಾನ ಮಾಡಲು ಅರ್ಜಿದಾರರು/ಪೋಷಕರು ಸಿದ್ದರಿರಬೇಕು.

**ನೇರ ಅವಧಿ ಸಾಲದ ಯೋಜನೆಯಡಿ (NMDFC) ವ್ಯಾಪಾರಕ್ಕಾಗಿ ಈ ಯೋಜನೆಯಡಿ ಸಾಲ ಸೌಲಭ್ಯ ಪಡೆಯಲು ಅರ್ಜಿದಾರರಿಗೆ ಇರಬೇಕಾದ ಅರ್ಹತೆ ಮತ್ತು ಷರತ್ತುಗಳು:**

1. ಸದರಿ ಯೋಜನೆಯಲ್ಲಿ 80:10:10 ಅನುಪಾತದಲ್ಲಿ ಅಂದರೆ ಶೇಕಡ 80 ರಷ್ಟು ಮುಸ್ಲಿಂ, ಶೇಕಡ 10 ರಷ್ಟು ಕ್ರೈಸ್ತರು ಹಾಗೂ 10 ರಷ್ಟು ಇತರೆ (ಜೈನರು, ಬೌದ್ಧರು, ಸಿಖ್ಖರು ಮತ್ತು ಪಾರ್ಸಿ) ಜನಾಂಗದವರಿಗೆ ನಿಗಮದಿಂದ ಸಾಲ ಸೌಲಭ್ಯವನ್ನು ಒದಗಿಸಲು ಅವಕಾಶವಿರುತ್ತದೆ.

2. ಮಹಿಳೆಯರಿಗೆ ಶೇಕಡ 33% ರಷ್ಟು, ಅಂಗವಿಕಲರಿಗೆ ಮತ್ತು ಮಾಜಿ ಸೈನಿಕರಿಗೆ ಶೇಕಡ 3% ತಪ್ಪದೆ ಆದ್ಯತೆ ಮೇರೆಗೆ ನಿಗಮದಿಂದ ಸಾಲ ಸೌಲಭ್ಯ ಒದಗಿಸಲು ಅವಕಾಶವಿರುತ್ತದೆ.

3. ಈ ಯೋಜನೆಯಡಿ ಸೌಲಭ್ಯ ಪಡೆಯುವ ಅರ್ಜಿದಾರರು ಸರ್ಕಾರವು ಅಂಗೀಕರಿಸಿದ ಅಲ್ಪಸಂಖ್ಯಾತ ಪ್ರವರ್ಗ –1, 2ಬಿ, ಮತ್ತು 3 ಬಿ ಗುಂಪಿಗ ಸೇರಿದವರಾಗಿರಬೇಕು (ಸರ್ಕಾರಿ ಆದೇ ಸಂಖ್ಯೆ:SWD/225/BCA/2000, ದಿನಾಂಕ: 30–03–2002.

4. ನಗರ ಪ್ರದೇಶದಲ್ಲಿ ವಾಸ ಮಾಡುವ ಅರ್ಜಿದಾರರ ಕುಟುಂಬದ ವಾರ್ಷಿಕ ಆದಾಯ ರೂ 1,03,000–00 ಲಕ್ಷಗಳು ಹಾಗೂ ಗ್ರಾಮಾಂತರ ಪ್ರದೇಶದಲ್ಲಿ ವಾಸ ಮಾಡುವ ಕುಟುಂಬ ವಾರ್ಷಿಕ ಆದಾಯ ರೂ 81,000–00 ಸಾವಿರ ಮೀರಿರಬಾರದು.

5. ಅರ್ಜಿದಾರರು ಕರ್ನಾಟಕ ರಾಜ್ಯದಲ್ಲಿ ಕನಿಷ್ಠ 18 ರಿಂದ ಗರಿಷ್ಠ 55 ವರ್ಷಗಳು ಮೀರಿರಬಾರರದು.

6. ಅರ್ಜಿದಾರರ ವಯೋಮಿತಿ ಕನಿಷ್ಠ 18 ವರ್ಷದಿಂದ ಗರಿಷ್ಠ 55 ವರ್ಷಗಳು ಮೀರಿರಬಾರದು.

7. ಅರ್ಜಿದಾರರು ತಮ್ಮ ವಿಳಾಸದ ದೃಢೀಕರಣಕ್ಕಾಗಿ ಆಧಾರ (UID) ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸಿ ಅದನ್ನು ಅರ್ಜಿದಾರರ ಬ್ಯಾಂಕ್ ಖಾತೆಗೆ ಹೊಂದಾಣಿಕೆ (LINK) ಮಾಡಬೇಕು ಮತ್ತು ನಿಗಮದ ನಿಯಮಾನುಸಾರ ಇತರೆ ದಾಖಲೆಗಳು ನೀಡಲು ಸಿದ್ಧರಿರಬೇಕು.

8.ಅರ್ಜಿದಾರರೇ ಖುದ್ದಾಗಿ ಜಿಲ್ಲಾ ಕಚೇರಿಗೆ ಭೇಟಿ ಮಾಡಿ ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿಗಳನ್ನು ಸಲ್ಲಿಸಬೇಕು ಹಾಗೂ ಅಪೂರ್ಣ ದಾಖಲಾತಿಗಳುಳ್ಳ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.

9.ಈ ಹಿಂದೆ ನಿಗಮದ ಯೋಜನೆಗಳನ್ನು ಸಾಲ ಸೌಲಭ್ಯ ಪಡೆದವರಿಗೆ ಮತ್ತೊಮ್ಮೆ ಸಾಲ ಸೌಲಭ್ಯ ಪಡೆಯಲು ಅರ್ಹತೆ ಇರುವುದಿಲ್ಲ.

10.ನಿಗಮದ ನಿಯಮಾನುಸಾರ ನಿಗಮದಿಂದ ನೀಡುವ ಸಾಲದ ಮೊತ್ತಕ್ಕೆ ಭದ್ರತೆಗಾಗಿ ಆಸ್ತಿಯನ್ನು ನಿಗಮದ ಹೆಸರಿಗೆ ಅಡಮಾನ ಮಾಡಲು ಅರ್ಜಿದಾರರು/ಪೋಷಕರು ಸಿದ್ದರಿರಬೇಕು.

# **ಕೃಷಿ ಮೇಳ 2018**

ಬೆಂಗಳೂರು, ನವೆಂಬರ್ 5 (ಕರ್ನಾಟಕ ವಾರ್ತೆ)

ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ವತಿಯಿಂದ ನವೆಂಬರ್ 15 ರಿಂದ 18 ರವರೆಗೆ ನಗರದ ಗಾಂಧಿ ಕೃಷಿ ವಿಜ್ಞಾನ ಕೇಂದ್ರದಲ್ಲಿ ಕೃಷಿ ಮೇಳ – 2018 ಹಮ್ಮಿಕೊಳ್ಳಲಾಗಿದೆ.

**ಈ ಮೇಳದ ವಿಶೇಷ ಆಕರ್ಷಣೆ:**

ಖುಷ್ಕಿ ಬೇಸಾಯಕ್ಕೆ ಸೂಕ್ತವಾದ ಬೆಳೆ ಪದ್ಧತಿಗಳು, ನೂತನವಾಗಿ ಬಿಡುಗಡೆಯಾದ ವಿವಿಧ ಬೆಳೆ ಗಳಿಗಳ ಪ್ರಾತ್ಯಕ್ಷಿಕೆ, ತೋಟಗಾರಿಕೆ ಬೆಳೆಗಳ ಮತ್ತು ನಿಖರ ಕೃಷಿ ಪ್ರಾತ್ಯಕ್ಷಿಕೆ, ಸಮಗ್ರ ಬೇಸಾಯ ಪದ್ಧತಿ ಪ್ರತ್ಯಾಕ್ಷಿಕೆ, ಸಿರಿಧಾನ್ಯಗಳು ಹಾಗೂ ಮಹತ್ವ, ಔಷಧೀಯ ಮತ್ತು ಸುಂಗಧಯುಕ್ತ ಸಸ್ಯಗಳು, ಜಲನಯನ ನಿರ್ವಹಣೆ, ಸಾವಯವ ಕೃಷಿ ಪದ್ಧತಿಗಳು, ಸಮಗ್ರ ಪೋಷಕಾಂಶಗಳು ಹಾಗೂ ಪೀಡೆ ನಿರ್ವಹಣೆ, ಮಣ್ಣು ಪರೀಕ್ಷೆಗನುಗುಣವಾಗಿ ಬೆಳೆ ಸ್ಪಂದನೆ ಪ್ರಾತ್ಯಕ್‌ಷಿಕೆ, ಹನಿ ಮತ್ತು ತುಂತರು ನೀರಾವರಿ ಪದ್ಧತಿಗಳು, ಮಳೆ ಹಾಗೂ ಮೇಲ್ಛಾವಣಿ ನೀರಿನ ಕೊಯ್ಲು, ಸುಧಾರಿತ ಕೃಷಿ ಯಂತ್ರೋಪಕರಣಗಳ ಪ್ರದರ್ಶನ, ಕೊಯ್ಲಿನೋತ್ತರ ತಾಂತ್ರಿಕತೆ, ಕೃಷಿ ಉತ್ಪನ್ನ ಸಂಸ್ಕರಣೆ ಮತ್ತು ಮೌಲ್ಯವರ್ಧನೆ, ಬಿತ್ತನೆ ಬೀಜಗಳ ಪರೀಕ್ಷೆ ಹಾಗೂ ಶೇಖರಣೆ, ಪಶುಸಂಗೋಪನೆ, ಹೈನುಗಾರಿಕೆ, ಕುರಿ, ಕೋಳಿ ಹಾಗೂ ಮೂನು ಸಾಕಣೆ, ಮಾರುಕ್ಟೆ ನೈಪುಣ್ಯತೆ ಮಾಹಿತಿ, ಹವಮಾನ ವೆಪ್ಯರೀತ್ಯ ಕೃಷಿ, ಕೃಷಿಯಲ್ಲಿ ನೂತನ ಮಾಹಿತಿ ತಂತ್ರಜ್ಞಾನ, ಜೈವಿಕ ಹಾಗೂ ನವೀಕರಸಲ್ಪಡುವ ಇಂಧನ ಇವುಗಳು ಕೃಷಿ ಮೇಳದ ಆಕಣೀಯವಾಗಿದೆ.

ರೈತರ ಸಮಸ್ಯೆಗಳಿಗೆ ತಜ್ಞರಿಂದ ಸಲಹೆ, ರೈತರಿಂದ ರೈತರಿಗಾಗಿ ಚರ್ಚಾಓಷ್ಠಿ, ಕೃಷಿ ಪರಿಕರಗಳ ಹಾಗೂ ಪ್ರಕಟಣೆಗಳ ಮಾರಾಟ ವ್ಯವಸ್ಥೆ ಮಾಡಲಾಗಿದೆ.

ಕೃಷಿ ಇಲಾಖೆ, ಕರ್ನಾಟಕ ಸರ್ಕಾರ ಹಾಗೂ ಕರ್ನಾಟಕ ರಾಜ್ಯ ಜಲಾನಯನ ಅಭಿವೃದ್ಧಿ, ತೋಟಗಾರಿಕೆ, ರೇಷ್ಮೆ, ಅರಣ್ಯ, ಪಶುಸಂಗೋಪನೆ, ಮೀನುಗಾರಿಕೆ, ಕೃಷಿ ಮಾರುಕಟ್ಟೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕರ್ನಾಟಕ ಹಾಲು ಮಹಾಮಂಡಳಿ ಮತ್ತು ಭಾರತೀಯ ತೋಟಗಾರಿಕೆ ಸಂಸ್ಥೆ, ಬೆಂಗಳೂರು ಇವರುಗಳ ಸಹಯೋಗದೊಂದಿಗೆ ಈ ಮೇಳವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕೃಷಿ ವಿಶ್ವವಿದ್ಯಾನಿಲಯದ ಪ್ರಕಟಣೆ ತಿಳಿಸಿದೆ.

## ಸಚಿವರ ಪ್ರವಾಸ

ಬೆಂಗಳೂರು, ನವೆಂಬರ್ 5 (ಕರ್ನಾಟಕ ವಾರ್ತೆ)

ಗಣಿ ಮತ್ತು ಭೂವಿಜ್ಞಾನ, ಮುಜರಾಯಿ ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ರಾಜಶೇಖರ ಬಿ. ಪಾಟೀಲ್ ಅವರು ನವೆಂಬರ್ 6 ರಿಂದ 13 ರವರೆಗೆ ಬೀದರ್ ಹಾಗೂ ಕಲಬುರಗಿ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ನವೆಂಬರ್ 13 ರಂದೇ ನಗರಕ್ಕೆ ಹಿಂತಿರುಗಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

### ಬೆಂಗಳೂರು ಜಲಮಂಡಲಿ : ನವೆಂಬರ್ 07 ರಂದು ಸಕಾನಿಅ(ಕೇಂದ್ರ-1) ಉಪವಿಭಾಗದಲ್ಲಿ ನೀರಿನ ಅದಾಲತ್

ಬೆಂಗಳೂರು, ನವೆಂಬರ್ 5 (ಕರ್ನಾಟಕ ವಾರ್ತೆ)

ಬೆಂಗಳೂರು ಜಲಮಂಡಲಿಯು ದಿ:07.11.2018 ರಂದು ಸಕಾನಿಅ(ಕೇಂದ್ರ-1) ಉಪವಿಭಾಗದಲ್ಲಿ ನೀರಿನ ಬಿಲ್ಲು, ನೀರು ಮತ್ತು ಒಳಚರಂಡಿ ಸಂಪರ್ಕಕಲ್ಪಿಸುವಲ್ಲಿನ ವಿಳಂಬ, ಗೃಹ ಬಳಕೆಯಿಂದ ಗೃಹೇತರ ಬಳಕೆ ಪರಿವರ್ತನೆ ವಿಳಂಬ ಮತ್ತಿತರ ಕುಂದುಕೊರತೆಗಳಿಗೆ ಸಂಬಂಧಿಸಿದಂತೆ ನೀರಿನ ಅದಾಲತ್‌ಅನ್ನು ಬೆಳಗ್ಗೆ 9.30 ರಿಂದ 11:00 ಗಂಟೆಯವರೆಗೆ ನಡೆಸಲಾಗುತ್ತದೆ.

ದಿನಾಂಕ: 07.11.2018 ರಂದು ಸಕಾನಿಅ(ಕೇಂದ್ರ-1) ಉಪವಿಭಾಗ ವ್ಯಾಪ್ತಿಗೆ ಬರುವ ಎಲ್.ಎಲ್.ಆರ್, ಚಿಕ್ಕಲಾಲ್ ಬಾಗ್, ಬನ್ನಪ್ಪ ಪಾರ್ಕ್, ಸುಧಾಮನಗರ-1 ಸೇವಾಠಾಣೆಗಳಿಗೆ

ಸಂಬಂಧಿಸಿದ ವಿವಾದಗಳನ್ನು ತುಳಸಿ ತೋಟ, ಚಿಕ್ಕಲಾಲ್ ಬಾಗ್ ಇಲ್ಲಿ ನಡೆಸಲಿದ್ದು ಸಮಸ್ಯೆಗಳನ್ನು ಪರಿಶೀಲಿಸಿ ಬಗೆಹರಿಸಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಬೇಕಾದ ದೂರವಾಣಿ ಸಂಖ್ಯೆ: ಕಾರ್ಯನಿರ್ವಾಹಕ ಅಭಿಯಂತರರು (ಕೇಂದ್ರ): 22945187. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಕೇಂದ್ರ-1) ಉಪವಿಭಾಗ: 22945188.

ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಲಿಯ 24/7 ದೂರು ನಿರ್ವಹಣಾ ಕೇಂದ್ರದ ದೂರವಾಣಿ ಸಂಖ್ಯೆ:22238888, ಸಹಾಯವಾಣಿ 1916 ಹಾಗೂ ವಾಟ್ಸ್ಆಪ್ ಸಂಖ್ಯೆ:8762228888 ಗೆ ಸಂಪರ್ಕಿಸಬಹುದಾಗಿದೆ.

## BWSSB: Water Adalath in AEE(Central-1) sub division on November 7th

**Bengaluru, November 5(Karnataka Information)**

BWSSB water Adalath is held on 07.11.2018 in AEE(Central-1) sub division from 9:30.am to 11.00 am to settle the grievances concerned with the water billing, delay in providing water supply & sanitary connections, delay in converting from domestic connection to non domestic connection & other related issues.

The disputes of consumers of LLR, Chikkalalbagh, Bannappa Park, Sudhamanagar-1, service station coming under AEE(Cental-1) sub division, will be discussed in detail & problems will be settled in the office of the Assistant Executive Engineer (Central-1) sub division, Tulasi Thota, Chikkalalbagh.

Details regarding the adalath can be obtained by the office of EE(Central): 22945187, or office of AEE (Central-1): 22945188.

For any problems regarding the water supply and all, publics can contact 24x7 call centre: 22238888 helpline number:1916 & whats app no: 8762228888 says official press release.

# IISc Institution of Eminence (IoE) notified as Deemed to be University

**Bengaluru, November 5(Karnataka Information)**

On the 11th of October 2018, the Indian Institute of Science (IISc) was formally notified as an Institution of Eminence (IoE) Deemed to be University.

Under this scheme, IISc will be supported by an additional Rs. 1,000 crores over 5 years, over and above its annual MHRD grant. The IoE tag will also allow IISc autonomy in many aspects of operation, including the ability to hire foreign faculty members to constitute up to 25% of its strength and flexibly utilize privately generated resources from alumni, industry and philanthropists.

IISc has committed to matching the additional support with funds raised from its own efforts. Further, IISc has committed to embark on an ambitious programme of expansion of research activities and infrastructure as well as a 20% expansion of its faculty and student strength. New interdisciplinary areas of researchcutting across all branches of science and engineeringwill be seeded, maintenance and operational support will be provided to major experimental and computational facilities, and a thriving culture of postdoctoral fellows acting as force multipliers will be established.

IISc's international engagement will also be enhanced through visiting professorships, support for attending conferences, increased intake of international students and the forging of partnerships with foreign universities involving joint student guidance and joint award of degrees. IoE resources will also allow IISc to upgrade its physical and IT infrastructure to make its operations and student experience modern and streamlined. With this impetus, IISc will be in a position to compete favourably with leading universities across the world on many fronts, and in doing so, improve its global presence and rankings says official press release.